**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು -1**

---

ಸಂಖ್ಯೆ:-ಸಿ1(4) ಸ.ಪ್ರೌ.ಶಾ.ಮು.ಶಿ.ಗ್ರೂಪ್-ಬಿ.ಸಾಮಾನ್ಯ ವರ್ಗಾವಣೆ: 26/2016-17 ದಿನಾಂಕ: 06-09-2016

ಬೆಂಗಳೂರು ಮತ್ತು ಮೈಸೂರು ವಿಭಾಗದ
ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ
ಜಿಲ್ಲಾ ಉಪನಿರ್ದೇಶಕರು (ಆಡಳಿತ)

ವಿಷಯ :-2016-17ನೇ ಸಾಲಿನ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ಮತ್ತು ತತ್ಸಮಾನ ವೃಂದಬಲ ಮತ್ತು ಖಾಲಿ ಹುದ್ದೆಗಳ ಮಾಹಿತಿಗಳನ್ನು ಆನ್ ಲೈನ್‌ನಲ್ಲಿ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:- 1. ಈ ಕಛೇರಿ ಅಧಿಕೃತ ಜ್ಞಾಪನ ಪತ್ರ ಸಮ ಸಂಖ್ಯೆ ದಿನಾಂಕ 02-08-2016.
2. ಈ ಕಛೇರಿ ಜ್ಞಾಪನಾ ಸಂಖ್ಯೆ:-ಸಿ1(4)/ಬಿ.ಆರ್.ಸಿ ಹುದ್ದೆ ಭರ್ತಿ-30/2016-17 (2ನೇ ಬ್ಯಾಚ್) ದಿನಾಂಕ: 31-08-2016

-*****-

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007ರಡಿಯಲ್ಲಿ ರೂಪಿಸಲಾಗಿರುವ ನಿಯಮಗಳಂತೆ. ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳ 2016-17ನೇ ಸಾಲಿನ ವರ್ಗಾವಣೆಗೆ ಸಂಬಂಧಿಸಿದಂತೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಮಾರ್ಗ ಸೂಚಿಯನ್ನು ಉಲ್ಲೇಖಿತ ಅಧಿಕೃತ ಜ್ಞಾಪನದಲ್ಲಿ ಹೊರಡಿಸಲಾಗಿದೆ.

ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳ ವರ್ಗಾವಣೆಗೆ ಪೂರ್ಣವಾಗಿ ತಂತ್ರಾಂಶವನ್ನೇ ಅವಲಂಬಿಸಿರುವುದು ತಿಳಿದಿರುವ ವಿಷಯವಾಗಿದೆ. ಆದ್ದರಿಂದ ಕರಾರುವಕ್ಕಾದ ಮಾಹಿತಿ ಅವಶ್ಯಕವಿರುತ್ತದೆ. ನಿಮ್ಮ ಜಿಲ್ಲೆಯಲ್ಲಿ ಪ್ರಸ್ತುತ ದಿನಾಂಕದವರೆಗೆ ಖಾಲಿ ಇರುವ (ಡಯಟ್ ಆಡಳಿತ ವ್ಯಾಪ್ತಿಯ ಉಪನ್ಯಾಸಕರ ಖಾಲಿ ಹುದ್ದೆಗಳನ್ನು ಒಳಗೊಂಡಂತೆ) ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಎಲ್ಲಾ ಖಾಲಿ ಹುದ್ದೆಗಳ (ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಹುದ್ದೆಗಳನ್ನು ಒಳಗೊಂಡಂತೆ) ಮಾಹಿತಿಯನ್ನು ತಂತ್ರಾಂಶದಲ್ಲಿ ಭರ್ತಿ ಮಾಡಲು ತಿಳಿಸಿದೆ.

ಉಲ್ಲೇಖ(2)ರನ್ವಯ ಬಿ.ಆರ್.ಸಿ ಪರೀಕ್ಷೆಯಲ್ಲಿ ಅರ್ಹತೆ ಹೊಂದಿ ಬಿ.ಆರ್.ಸಿ ಹುದ್ದೆಗಳಿಗೆ ಸ್ಥಳ ಆಯ್ಕೆ ಮಾಡಿಕೊಂಡಿರುವವರ ಹುದ್ದೆಗಳನ್ನು ಸಹ ಖಾಲಿ ಹುದ್ದೆ ಮಾಹಿತಿಯಲ್ಲಿ ಭರ್ತಿ ಮಾಡುವುದು.

<u>ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಸಹಾಯಕ ಯೋಜನಾ ಸಮನ್ವಯಾಧಿಕಾರಿ ಹುದ್ದೆಗಳನ್ನು ತುಂಬಬಾರದೆಂದು ರಾಜ್ಯ ಯೋಜನಾ ನಿರ್ದೇಶಕರು, ಆರ್.ಎಂ.ಎಸ್.ಎ, ಬೆಂಗಳೂರು ಇವರಿಂದ ನಿರ್ದೇಶನವಿರುವುದರಿಂದ ಆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಬಾರದು.</u>

**ಆನ್ ಲೈನ್‌ನಲ್ಲಿ ಭರ್ತಿ ಮಾಡಿದ ಖಾಲಿ ಹುದ್ದೆಗಳ ಮಾಹಿತಿಯನ್ನು ಪ್ರಿಂಟ್ ತೆಗೆದು ದೃಢೀಕರಿಸಿ, ದಿನಾಂಕ 13-09-2016 ರೊಳಗೆ ಈ ಕಛೇರಿಗೆ ತಲುಪುವಂತೆ ಕಳುಹಿಸಲು ಕೋರಿದೆ.**

ತಮ್ಮ ನಂಬುಗೆಯ,

(ಎಸ್.ಕಾತ್ಯಾಯನಿದೇವಿ)
ಜಂಟಿ ನಿರ್ದೇಶಕರು (ಆಡಳಿತ)

**ಪ್ರತಿಯನ್ನು: ಅಪರ ಆಯುಕ್ತರು, ಸಾ.ಶಿ.ಇಲಾಖೆ, ಕಲ್ಬುರ್ಗಿ ಮತ್ತು ಧಾರವಾಡ ಇವರಿಗೆ ಮಾಹಿತಿಗಾಗಿ**

7.9.16